**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಗಳವರ ನ್ಯಾಯಾಲಯ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ**

# ಎಂ.ವಿ.ಸಿ.ನಂ. 501-2023

ಆರ್‌ಡಬ್ಲ್ಯೂ: 1

ದಿನಾಂಕ 29-01-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ: 3 ನೇ ಎದುರುದಾರರ ಪರ: ಶ್ರೀ ಸಿ ಜೆ ಎಂ ವಕೀಲರಿಂದ:

ನಾನು ಈ ಅರ್ಜಿಯಲ್ಲಿ 3 ನೇ ಎದುರುದಾರರ ಕಂಪನಿಯಲ್ಲಿ ಆಡಳಿತ ಅಧಿಕಾರಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಹೇಳಿಕೆ ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯವೆಲ್ಲಾ ಸತ್ಯವಾಗಿರುತ್ತದೆ. ಅದನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ.

ಕಂಪನಿಯವರು ನೀಡಿರುವ ಆತರೈಸೇಷನ್ ಲೆಟರನ್ನು ಹಾಜರುಪಡಿಸಿದ್ದು ಅದನ್ನು ನಿಆರ್-1 ಎಂದು, ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್-2 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿದಾರರ ಅರ್ಜಿಯನ್ನು ವಜಾ ಮಾಡಬೇಕಾಗಿ ಕೇಳಿಕೊಳ್ಳುತ್ತೇನೆ.

ಪಾಟೀ ಸವಾಲು: ಅರ್ಜಿದಾರರ ಪರ: ಶ್ರೀ ಬಿ ಎಸ್ ಪಿ ವಕೀಲರಿಂದ:

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ 1 ನೇ ಎದುರುದಾರರ ತಪ್ಪಿನಿಂದ ಅಪಘಾತವಾಗಿಲ್ಲ ಬೈಕು ಸವಾರನ ತಪ್ಪಿನಿಂದ ಅಪಘಾತವಾಗಿದೆ ಎಂದುಸ ುಳ್ಳು ಹೇಳಿರುತ್ತೇನೆ ಎಂದರೆ ಸರಿಯಲ್ಲ. ಪೋಲೀಸರು ತನಿಖೆ ಕೈಗೊಂಡು 1 ನೇ ಎದುರುದಾರರ ತಪ್ಪಿನಿಂದಲೇ ಅಪಘಾತವಾಗಿದೆ ಎಂದು ದೋಷಾರೋಪಣಾ ಪತ್ರ ಸಲ್ಲಿಸಿರುತ್ತಾರೆ ಎಂದರೆ ಸರಿ. ಸಾಕ್ಷಿ ಮುಂದುವರೆದು ಅದನ್ನು ನಾನು

ಒಪ್ಪುವುದಿಲ್ಲ ಎಂದು ನುಡಿಯುತ್ತಾರೆ. ಸದರಿ ದೋಷಾರೋಪಣಾ ಪಟ್ಟಿಯ ವಿರುದ್ದ ನಾನು ಯಾವುದಾದರೂ ಕಾನೂನು ಕ್ರಮ ಜರುಗಿಸಿರುತ್ತೇನಾ ಎಂದರೆ ಸಾಕ್ಷಿ ಇಲ್ಲವೆಂದು ನುಡಿಯುತ್ತಾರೆ. 1 ನೇ ಎದುರುದಾರರು ಕ್ರಿಮಿನಲ್ ಪ್ರಕರಣದಲ್ಲಿ ತನ್ನ ತಪ್ಪಿನಿಂದಲೇ ಅಪಘಾತವಾಗಿದೆ ಎಂದು ಒಪ್ಪಿ ದಂಡ ಪಾವತಿ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ವಿಳಂಬವಾಗಿ ಅರ್ಜಿ ಸಲ್ಲಿಸಿರುವ ಬಗ್ಗೆ ಅರ್ಜಿದಾರರು ತಮ್ಮ ಅರ್ಜಿಯಲ್ಲಿ ಸೂಕ್ತವಾದ ಸಮಜಾಯಿಷಿ ನೀಡಿರುತ್ತಾರೆ ಎಂದರೆ ಸಾಕ್ಷಿ ನೀಡಿಲ್ಲ ಎಂದು ನುಡಿಯುತ್ತಾರೆ. ಪರಿಹಾರ ಕೊಡುವುದನ್ನು ತಪ್ಪಿಸಿಕೊಳ್ಳಲು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ: ಇಲ್ಲ

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ, ಕಡೂರು.